2. ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು :

ಶ್ರೀ ಎಸ್.ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರು) : ಮಾನ್ಯ ಅಧ್ಯಕ್ಷರೆ, ದಿನಾಂಕ: 12ನೇ ಮಾರ್ಚ್ 2010ರ 5ನೇ ಪಟ್ಟಿಯಿಂದ ಲಿಖಿತ ಮೂಲಕ ಉತ್ತರಿಸುವ 87 ಪ್ರಶ್ನೆಗಳ ಪೈಕಿ 80 ಪ್ರಶ್ನೆಗಳ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

(ಅನುಬಂಧ–1)

ಅಧ್ಯಕ್ಷರು : ಮಂಡಿಸಲಾಯಿತು.

3. ಚುನಾವಣಾ ಪ್ರಸ್ತಾವ :

ಶ್ರೀ ಎಸ್. ಸುರೇಶ್‌ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರು) : ಕರ್ನಾಟಕ ರಾಜ್ಯ ಡಾ:ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ವಿಶ್ವವಿದ್ಯಾನಿಲಯಗಳ ಸಿಂಡಿಕೇಟ್‌ಗೆ ನಡೆಯುವ ಚುನಾವಣಾ ಪ್ರಸ್ತಾವವನ್ನು ನಾನು ದಿನಾಂಕ: 02.03.2010 ರಂದು ಮಂಡಿಸಿರುತ್ತೇನೆ. ತದನಂತರ ಚುನಾವಣಾ ವೇಳಾಪಟ್ಟಿಯನ್ನು ಹೊರಡಿಸಲಾಗಿ, ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ವಿಶ್ವವಿದ್ಯಾ ನಿಲಯಗಳ ಸಿಂಡಿಕೇಟ್‌ಗೆ ಒಬ್ಬರು ವಿಧಾನ ಸಭಾ ಸದಸ್ಯರನ್ನು ನಾಮ ನಿರ್ದೇಶನ ಮಾಡಲು ಈ ಸದನವು ಮಾನ್ಯ ಸಭಾಧ್ಯಕ್ಷರಿಗೆ ಅಧಿಕಾರವನ್ನು ನೀಡಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ವಿಶ್ವವಿದ್ಯಾನಿಲಯಗಳ ಸಿಂಡಿಕೇಟ್‌ಗೆ ಒಬ್ಬರು ವಿಧಾನ ಸಭಾ ಸದಸ್ಯರನ್ನು ನಾಮ ನಿರ್ದೇಶನ ಮಾಡಲು ಈ ಸದನವು ಮಾನ್ಯ ಸಭಾಧ್ಯಕ್ಷರಿಗೆ ಅಧಿಕಾರವನ್ನು ನೀಡುವುದು"